159260
(104)

# ಕರ್ನಾಟಕ ವಿಧಾನ ಪರಿಷತ್ತು
## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎ. ವಸಂತ ಕುಮಾರ್ - ರವರು ಮಂಡಿಸಿರುವ ನಿಯಮ 72 ರಡಿಯಲ್ಲಿ ಗಮನ ಸೆಳೆಯುವ ಸೂಚನೆಗೆ ಉತ್ತರ

**ವಿಷಯ:**

ರಾಯಚೂರು ಜಿಲ್ಲೆಯ ಮಾನವಿ ಹಾಗೂ ಸಿರವಾರ ತಾಲ್ಲೂಕುಗಳ ಸರ್ಕಾರಿ ಜಮೀನುಗಳಲ್ಲಿ ನಿರ್ಮಿಸಿರುವ ವಿವಿಧ ಚೆಕ್ ಡ್ಯಾಂ ಕಾಮಗಾರಿಗಳಲ್ಲಿ ಕಳಪೆ ಗುಣಮಟ್ಟದ ಆರೋಪಗಳು ಕೇಳಿಬಂದಿವೆ. ತಾಂತ್ರಿಕ ಮಾನದಂಡಗಳನ್ನು ಸಮರ್ಪಕವಾಗಿ ಪಾಲಿಸದೇ ಕಾಮಗಾರಿ ನಡೆಸಲಾಗಿದೆ ಎಂಬ ಗಂಭೀರ ಆರೋಪಗಳಿವೆ. ಎಸ್.ಇ.ಪಿ. ಮತ್ತು ಟಿ.ಎಸ್.ಪಿ. ಅನುದಾನ ದುರ್ಬಳಕೆಯಾಗಿದೆ ಎಂಬ ಸಾರ್ವಜನಿಕರ ಹಾಗೂ ಸಂಘಟನೆಗಳ ಆರೋಪಗಳು ಆತಂಕಕ್ಕೆ ಕಾರಣವಾಗಿವೆ. ಕಾಮಗಾರಿಗಳ ಅಂದಾಜು, ಬಳಸಿದ ಸಾಮಗ್ರಿಗಳ ಪ್ರಮಾಣ ಮತ್ತು ಗುಣಮಟ್ಟದ ಕುರಿತು ಅನುಮಾನಗಳು ವ್ಯಕ್ತವಾಗಿವೆ. ಅಳತೆ ಪುಸ್ತಕ, ಬಿಲ್ ಪಾವತಿ ಹಾಗೂ ಕಾಮಗಾರಿ ಪೂರ್ಣಗೊಂಡ ಪ್ರಮಾಣದಲ್ಲಿಯೂ ಅಕ್ರಮಗಳಿರುವ ಶಂಕೆಯಿದೆ. ಅಧಿಕಾರಿಗಳ ಸಮರ್ಪಕ ಮೇಲ್ವಿಚಾರಣೆ ಮತ್ತು ತಾಂತ್ರಿಕ ಪರಿಶೀಲನೆಯ ಕೊರತೆಯಿಂದ ಸರ್ಕಾರಕ್ಕೆ ನಷ್ಟವಾಗಿರುವ ಸಾಧ್ಯತೆಯಿದೆ. ಆದ್ದರಿಂದ ಮಾನವಿ ಹಾಗೂ ಸಿರವಾರ ವ್ಯಾಪ್ತಿಯ ಎಲ್ಲಾ ಚೆಕ್ ಡ್ಯಾಂ ಕಾಮಗಾರಿಗಳ ಸ್ವತಂತ್ರ ತಾಂತ್ರಿಕ ಮತ್ತು ಆರ್ಥಿಕ ಪರಿಶೀಲನೆ ನಡೆಸಬೇಕು. ಮಂಜೂರಾದ ಅನುದಾನ, ಖರ್ಚಾದ ಮೊತ್ತ, ಬಿಲ್ ಪಾವತಿ ಹಾಗೂ ಕಾಮಗಾರಿಗಳ ವಾಸ್ತವಿಕ ಸ್ಥಿತಿಯ ಸಮಗ್ರ ವರದಿ ಸಿದ್ಧಪಡಿಸಬೇಕು. ಸಣ್ಣ ನೀರಾವರಿ ಇಲಾಖೆಯ ಸಂಬಂಧಪಟ್ಟ ಅಧಿಕಾರಿಗಳು ಹಾಗೂ ಗುತ್ತಿಗೆದಾರರ ಪಾತ್ರವನ್ನು ಸಮಗ್ರವಾಗಿ ತನಿಖೆಗೊಳಪಡಿಸಬೇಕು. ಅಕ್ರಮ ಅಥವಾ ಕಳಪೆ ಕಾಮಗಾರಿ ದೃಢಪಟ್ಟಲ್ಲಿ ತಪ್ಪಿತಸ್ಥರ ವಿರುದ್ಧ ಕ್ರಿಮಿನಲ್ ಹಾಗೂ ಇಲಾಖಾ ಕ್ರಮ ಕೈಗೊಳ್ಳಬೇಕು. ಸರ್ಕಾರಕ್ಕೆ ಉಂಟಾದ ನಷ್ಟವನ್ನು ತಪ್ಪಿತಸ್ಥ ಅಧಿಕಾರಿಗಳು ಮತ್ತು ಗುತ್ತಿಗೆದಾರರಿಂದಲೇ ವಸೂಲಿ ಮಾಡಬೇಕು. ತನಿಖಾ ವರದಿಯನ್ನು ಸಾರ್ವಜನಿಕಗೊಳಿಸಿ. ಎಸ್.ಇ.ಪಿ. ಮತ್ತು ಟಿ.ಎಸ್.ಪಿ. ಅನುದಾನದ ಬಳಕೆಯಲ್ಲಿ ಕಟ್ಟುನಿಟ್ಟಿನ ಮೇಲ್ವಿಚಾರಣೆ ಹಾಗೂ ಪಾರದರ್ಶಕ ವ್ಯವಸ್ಥೆ ಜಾರಿಗೊಳಿಸುವ ಕುರಿತು.

**ಉತ್ತರ:**

ಸಣ್ಣ ನೀರಾವರಿ ಇಲಾಖೆಯಿಂದ ಅನುಷ್ಠಾನಗೊಳಿಸಲಾಗುತ್ತಿರುವ ಸಣ್ಣ ನೀರಾವರಿ ಯೋಜನೆಗಳನ್ನು, ಅವುಗಳ ತಾಂತ್ರಿಕ ಮತ್ತು ಆರ್ಥಿಕ ಸಾಧ್ಯತೆಗೆ ಅನುಸಾರವಾಗಿ ಕೈಗೊಳ್ಳಲಾಗುತ್ತಿದೆ.

ಕಾಮಗಾರಿಗಳ ಅಂದಾಜು ಪಟ್ಟಿಗಳನ್ನು ಇಲಾಖೆಯ ವಿವಿಧ ಹಂತದ ಅಧಿಕಾರಿಗಳಿಗೆ ನೀಡಿದ ಆರ್ಥಿಕ ಅಧಿಕಾರಿ ಪ್ರತ್ಯಾಯೋಜನೆಯನ್ವಯ ಸಂಬಂಧಿಸಿದ ಅಧಿಕಾರಿಗಳಿಂದ ಆಡಳಿತಾತ್ಮಕ ಅನುಮೋದನೆ ಮತ್ತು ತಾಂತ್ರಿಕ ಮಂಜೂರಾತಿಯನ್ನು ನೀಡಲಾಗುತ್ತಿದೆ.

ತದನಂತರ, ಕಾಮಗಾರಿಗಳನ್ನು ಕೆ.ಟಿ.ಪಿ.ಪಿ. ಅಧಿನಿಯಮ 1999, ನಿಯಮಗಳು 2000 ರನ್ವಯ ಟೆಂಡರ್ ಕರೆದು ಅನುಷ್ಠಾನಗೊಳಿಸಲಾಗುತ್ತಿದೆ.

ಸಣ್ಣ ನೀರಾವರಿ ಇಲಾಖೆಯ ಅಧೀನದಲ್ಲಿರುವ ಗುಣನಿಯಂತ್ರಣ ಪ್ರಾಧಿಕಾರದಿಂದ ಕಾಲಕಾಲಕ್ಕೆ ಕಾಮಗಾರಿಗಳ ಗುಣಮಟ್ಟವನ್ನು ಪರೀಕ್ಷಿಸಿ ಅವರಿಂದ ಪರೀಕ್ಷಾ ಫಲಿತಾಂಶ ಪಡೆಯಲಾಗುತ್ತಿದೆ.

ಮುಂದುವರೆದು, ಸಣ್ಣ ನೀರಾವರಿ ಇಲಾಖೆಯ ಕಾಮಗಾರಿಗಳಿಗೆ ಸಂಬಂಧಿಸಿದಂತೆ, ಕರ್ತವ್ಯಲೋಪವೆಸಗಿರುವುದಾಗಿ, ಭ್ರಷ್ಟಾಚಾರ ಮಾಡಿರುವುದಾಗಿ ಹಾಗೂ ಕಳಪೆ ಕಾಮಗಾರಿ ನಿರ್ವಹಿಸಿರುವ ಕುರಿತಂತೆ ದೂರುಗಳು ಸ್ವೀಕೃತವಾಗುತ್ತಿರುವ ಕಾರಣ, ಸದರಿ ದೂರುಗಳ ಮೇಲ್ವಿಚಾರಣೆಗಾಗಿ/ ಸತ್ಯಾಸತ್ಯತೆಯನ್ನು ಪರಿಶೀಲಿಸಲು ಇಲಾಖೆಯಿಂದ ಸಮಿತಿಯನ್ನು ರಚಿಸಲಾಗಿದ್ದು, ಸದರಿ ಸಮಿತಿಯು ಮಾನ್ಯ ಶಾಸಕರು ಪ್ರಸ್ತಾಪಿಸಿರುವ ರಾಯಚೂರು ಜಿಲ್ಲೆಯ ಮಾನ್ವಿ ಹಾಗೂ ಸಿರವಾರ ತಾಲ್ಲೂಕುಗಳಲ್ಲಿನ ಕಾಮಗಾರಿಗಳ ಸ್ಥಳ ಪರಿವೀಕ್ಷಣೆಯನ್ನು ಈಗಾಗಲೇ ಕೈಗೊಂಡಿದ್ದು, ಸದರಿ ಸಮಿತಿಯಿಂದ ವರದಿಯನ್ನು ನಿರೀಕ್ಷಿಸಲಾಗಿದೆ.

ಸದರಿ ಸಮಿತಿಯ ವರದಿಯನ್ನು ಆಧರಿಸಿ ಅಧಿಕಾರಿಗಳು ಹಾಗೂ ಗುತ್ತಿಗೆದಾರರು ಅಕ್ರಮ ವೆಸಗಿರುವುದು ಕಂಡು ಬಂದಲ್ಲಿ, ಇಲಾಖೆ / ಗುತ್ತಿಗೆ ನಿಯಮಾನುಸಾರ ಸೂಕ್ತ ಕ್ರಮಕೈಗೊಳ್ಳಲಾಗುವುದು.

ಸಂಖ್ಯೆ: MID/78/LCQ/2026.

**(ಡಾ. ಅಜಯ್ ಧರ್ಮಸಿಂಗ್)**
ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ
ಸಚಿವರು.